## 13. ಸುರೇಶ್ ಚನ್ನಬಸಪ್ಪ ಅಂಗಡಿ, ಕೇಂದ್ರ ಸಚಿವರು

ಕೊರೋನಾ ಸೋಂಕಿಗೆ ತುತ್ತಾಗಿ ದೆಹಲಿಯ ಏಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ, ಬೆಳಗಾವಿ ಸಂಸದ ಸುರೇಶ್ ಅಂಗಡಿ ಅವರು ದಿನಾಂಕ: 23.09.2020ರಂದು ಕೋವಿಡ್‌ಗೆ ಬಲಿಯಾದ ಮೊದಲ ಕೇಂದ್ರ ಸಚಿವರಾಗಿದ್ದಾರೆ. ಸುರೇಶ್ ಅಂಗಡಿ ಅವರಿಗೆ ಸೆಪ್ಟೆಂಬರ್ 11ರಂದು ಸೋಂಕು ದೃಢಪಟ್ಟಿತ್ತು.

**ಸತತ ನಾಲ್ಕು ಬಾರಿ ಗೆಲುವು:–**ಬೆಳಗಾವಿ ತಾಲೂಕಿನ ಕೆ.ಕೆ.ಕೊಪ್ಪ ಗ್ರಾಮದವರಾದ ಸುರೇಶ್ ಅಂಗಡಿ ಅವರು ಚನ್ನಬಸಪ್ಪ ಅಂಗಡಿ, ಸೋಮವ್ವ ದಂಪತಿ 2ನೇ ಪುತ್ರ. ಕಾನೂನು ಪದವೀಧರರಾಗಿದ್ದ ಅವರು ತಮ್ಮದೇ ಹೆಸರಿನ ಪ್ರತಿಷ್ಠಾನದ ಮೂಲಕ ನರ್ಸರಿಯಿಂದ ಎಂಜಿನೀಯರಿಂಗ್‌ವರೆಗೆ ಹಲವು ಶಿಕ್ಷಣ ಸಂಸ್ಥೆಗಳನ್ನು ಮುನ್ನೆಡೆಸುತ್ತಿದ್ದರು.

ಕೇಂದ್ರದ ಹಾಲಿ ರೈಲ್ವೆ ಖಾತೆಯ ರಾಜ್ಯ ಸಚಿವರಾಗಿದ್ದ ಅವರು ದಿನಾಂಕ: 01.06.1955ರಂದು ಬೆಳಗಾವಿ ಜಿಲ್ಲೆಯ ಕೆ. ಕೊಪ್ಪ ಗ್ರಾಮದಲ್ಲಿ ಜನಿಸಿದ್ದು, ಬಿ.ಕಾಂ ಹಾಗೂ ಎಲ್‌ಎಲ್.ಬಿ. ಪದವೀಧರರಾಗಿದ್ದರು. ವೃತ್ತಿಯಲ್ಲಿ ಉದ್ಯಮಿಯಾಗಿದ್ದು, ಸಾಮಾಜಿಕ ಸೇವೆಗಳಲ್ಲಿಯೂ ಆಸಕ್ತಿ ಹೊಂದಿದ್ದ ಅವರು 2004ರಲ್ಲಿ ಮೊದಲನೇ ಬಾರಿಗೆ ಲೋಕಸಭೆಗೆ ಆಯ್ಕೆಯಾಗಿದ್ದು, ನಂತರ 2009, 2014 ಹಾಗೂ 2019ರಲ್ಲಿ ಸತತವಾಗಿ ನಾಲ್ಕು ಬಾರಿ ಚುನಾಯಿತರಾಗಿದ್ದರು. ಸಂಸತ್ತಿನ ವಿವಿಧ ಸ್ಥಾಯಿ ಸಮಿತಿಗಳಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸಿದ್ದ ಅವರು 2019ರಲ್ಲಿ ರೈಲ್ವೆ ಖಾತೆಯ ರಾಜ್ಯ ಸಚಿವರಾಗಿ ಬೆಳಗಾವಿ – ಬೆಂಗಳೂರು ಸೂಪರ್ ಫಾಸ್ಟ್ ರೈಲು, ಬೆಳಗಾವಿ – ಕಿತ್ತೂರು – ಧಾರವಾಡ ರೈಲು ಮಾರ್ಗ ಸಮೀಕ್ಷೆಗೆ ಅನುಮೋದನೆ ಸೇರಿದಂತೆ ರಾಜ್ಯಕ್ಕೆ ಹಲವು ಕೊಡುಗೆಗಳನ್ನು ನೀಡಿದ್ದರು. ಉತ್ತರ ಕರ್ನಾಟಕದಲ್ಲಿ ನೆನೆಗುದಿಗೆ ಬಿದ್ದಿದ್ದ ಹಲವು ರೈಲ್ವೆ ಯೋಜನೆಗಳಿಗೆ ಜೀವ ತುಂಬುವ ಗುರಿ ಹೊಂದಿದ್ದರು. ಬಡ ಜನರ ಶಿಕ್ಷಣದ ಕುರಿತು ವಿಶೇಷ ಕಾಳಜಿ ಹೊಂದಿದ್ದ ಶ್ರೀಯುತರು ನರ್ಸರಿಯಿಂದ ಇಂಜಿನಿಯರಿಂಗ್‌ವರೆಗೆ ಅತ್ಯಾಧುನಿಕ ಅನುಕೂಲಗಳಿರುವ ಶೈಕ್ಷಣಿಕ ಸಂಸ್ಥೆಗಳನ್ನು ಸ್ಥಾಪಿಸಿದ್ದರು. "ಜನರಿಂದಲೇ ಮೇಲೆ ಬಂದಿದ್ದೇನೆ, ಯಾವಾಗಲೂ ಜನರಿಗಾಗಿ ದುಡಿಯುತ್ತೇನೆ" ಎಂಬುದು ಅವರ ಧ್ಯೇಯ ವಾಕ್ಯವಾಗಿತ್ತು.

**ಪ್ರಧಾನಿ ಮೋದಿ ಸಂತಾಪ:–** ಕರ್ನಾಟಕದಲ್ಲಿ ಬಿಜೆಪಿಯ ಬಲವರ್ಧನೆಗೆ ಶ್ರಮಿಸಿದ ಸುರೇಶ್ ಅಂಗಡಿ ಅವರು ಅಪ್ರತಿಮ ಕಾರ್ಯಕರ್ತರಾಗಿದ್ದರು. ಅವರೊಬ್ಬ ಉತ್ತಮ ಸಂಸದ ಹಾಗೂ ಸಚಿವರಾಗಿದ್ದರು. ಅವರ ಅಗಲಿಕೆಯಿಂದ ತೀವ್ರ ನೋವಾಗಿದೆ. ಅವರ ಕುಟುಂಬಸ್ಥರು ಹಾಗೂ ಸ್ನೇಹಿತರಿಗೆ ಅವರ ಸಾವಿನ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಪ್ರಧಾನಿ ಮಂತ್ರಿ ನರೇಂದ್ರ ಮೋದಿ ಅವರು ಹೇಳಿದರು.

ಆಧಾರ:ಕನ್ನಡಪ್ರಭ, ದಿನಾಂಕ:24.02.2020